ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಅಕ್ಟೋಬರ್ 15 , 2014

## ಪತ್ರಿಕಾ ಪ್ರಕಟಣೆ

# ಮಾಜಿ ಸಚಿವ ಎಂ. ಎಸ್. ನಾಗರಾಳ್ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಅಕ್ಟೋಬರ್ 15 :

ಮಾಜಿ ಸಚಿವ ಶ್ರೀ ಎಂ. ಎಸ್. ನಾಗರಾಳ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಅವಿಭಜಿತ ಬಿಜಾಪುರ ಜಿಲ್ಲೆಯ ಹುನಗುಂದ ತಾಲ್ಲೂಕಿನ ಶ್ರೀ ನಾಗರಾಳ್ ಅವರು ದೇವರಾಜ ಅರಸು ಅವರ ಸಚಿವ ಸಂಪುಟದಲ್ಲಿ ರೇಷ್ಮೆ, ಸಣ್ಣ ನೀರಾವರಿ ಹಾಗೂ ಅರಣ್ಯ ಖಾತೆಗಳನ್ನು ಸಮರ್ಥವಾಗಿ ನಿರ್ವಹಿಸಿ ಜನಮನ್ನಣೆ ಗಳಿಸಿದ್ದರು. ಪಕ್ಷದ ಸಂಘಟನೆಯಲ್ಲೂ ತಮ್ಮದೇ ಛಾಪು ಮೂಡಿಸಿದ್ದ ಶ್ರೀ ನಾಗರಾಳ್ ಅವರು ಜನ ಮೆಚ್ಚಿದ ನಾಯಕನಾಗಿದ್ದರಲ್ಲದೆ, ಸ್ನೇಹಜೀವಿಯಾಗಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

ಶ್ರೀ ನಾಗರಾಳ್ ಅವರ ಆತ್ಮಕ್ಕೆ ಶಾಂತಿ ದೊರಕಲೆಂದೂ ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಕುಟುಂಬ ವರ್ಗಕ್ಕೆ ನೀಡುವಂತೆಯೂ ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

*************

ಡಿ ಪಿ ಎಂ